**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ**

**ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 371/2018**

ಚಾ.ಸಾ-05, ಪ್ರಾ.ಸಾ-06

| | | |
|---|---|---|
| ಹೆಸರು | : | ರವಿಕುಮಾರ್ |
| ತಂದೆಯ ಹೆಸರು | : | ಲೇಟ್ ನಿಂಗಯ್ಯ |
| ವಯಸ್ಸು | : | 50 ವರ್ಷ |
| ವೃತ್ತಿ | : | ಕೂಲಿಕೆಲಸ |
| ವಾಸ | : | ತುಂಬಲ ಗ್ರಾಮ, ತಿ.ನರಸೀಪುರ ತಾಲ್ಲೂಕು |

**ದಿನಾಂಕಃ 07.03.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ. ಪೊಲೀಸರು ನನ್ನ ಸಹಿಯನ್ನು ಮಾತ್ರ ಪಡೆದಿರುತ್ತಾರೆ. ಸಾಕ್ಷಿಯ ಸಹಿ ಇರುವ ದಾಖಲೆಯು ಸ್ಥಳ ಪಂಚನಾಮವಾಗಿದ್ದು, ಅದು ಈಗಾಗಲೇ ನಿಪಿ-2 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 10.09.2017 ರಂದು ಆಗಿದ್ದ ಘಟನೆಯ ಸಂಬಂಧ ದಿನಾಂಕ 15.09.2017 ರಂದು ಬೆಳಿಗ್ಗೆ 11.15 ರಿಂದ 11.45 ಗಂಟೆ ಸಮಯದಲ್ಲಿ

**ಸಿಸಿ ಸಂಖ್ಯೆ371/2018**

ಘಟನಾ ಸ್ಥಳದಲ್ಲಿ ಪಂಚನಾಮವನ್ನು ನಿಪಿ.2 ರಂತೆ ಪ್ರಾಸಾ-1 ರವರು ತೋರಿಸಿದ ಪ್ರಕಾರ ನನ್ನ ಮತ್ತು ಪ್ರಾಸಾ-5 ರವರ ಸಮಕ್ಷಮ ಜರುಗಿಸಲಾಯಿತು ಎಂದರೆ ಸರಿಯಲ್ಲ.

ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)
ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ., ತಿ.ನರಸೀಪುರ**